**Akashvani : Bangalore**
**Regional Bulletin In Kannada**
**06.06.2025 / 18.40 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**06.06.2025 / 18.40 hrs**
**<><*<><>*><>**

## ಮುಖ್ಯಾಂಶಗಳು

**೧. ಚಿನ್ನಸ್ವಾಮಿ ಕ್ರೀಡಾಂಗಣ ಕಾಲ್ತುಳಿತ ಪ್ರಕರಣ: ರಾಜ್ಯ ಸರ್ಕಾರವೇ ನೇರ ಹೊಣೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆರೋಪ**

**೨. ವಿದ್ಯಾರ್ಥಿಗಳು ಸಾಧಕರ ಮಾರ್ಗ ಅನುಸರಿಸಿ ದೇಶಕ್ಕೆ ಕೊಡುಗೆ ನೀಡಿ; ಸಚಿವ ಎನ್.ಚೆಲುವರಾಯಸ್ವಾಮಿ**

**೩. ಬೆಂಗಳೂರಿನಲ್ಲಿ ಜಿಲ್ಲಾ ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ**

**೪. ವಿಕಸಿತ ಸಂಕಲ್ಪ ಯಾತ್ರೆ: ವಿಜಯನಗರ ಜಿಲ್ಲೆ ಸೇರಿದಂತೆ ಹಲವೆಡೆ ಯಶಸ್ವಿ ಅಭಿಯಾನ**

**<><*<><>*><>**

ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಬುಧವಾರ ಸಂಭವಿಸಿದ ಕಾಲ್ತುಳಿತಕ್ಕೆ ಸರಕಾರವೇ ನೇರ ಹೊಣೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ಶುಕ್ರವಾರ ಎನ್‌ಡಿಎ ಜಂಟಿ ಸುದ್ದಿಗೋಷ್ಠಿಯಲ್ಲಿ ಪ್ರತಿಪಕ್ಷ ನಾಯಕ ಆರ್. ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರೊಂದಿಗೆ ಮಾಧ್ಯಮಗಳ ಜತೆ ಮಾತನಾಡಿದರು. ಹನ್ನೊಂದು ಜನರ ಸಾವಿಗೆ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ಮುಖ್ಯಮಂತ್ರಿ ಅವರ ರಾಜಕೀಯ ಕಾರ್ಯದರ್ಶಿ ಗೋವಿಂದ ರಾಜು ಅವರೇ ಕಾರಣ ಎಂದು ಆರೋಪಿಸಿದರು. ತಪ್ಪು ಮಾಡಿದ್ದು ಸರ್ಕಾರ, ಶಿಕ್ಷೆಗೆ ಗುರಿಯಾಗಿದ್ದು ಅಧಿಕಾರಿಗಳು. ದಕ್ಷ ಪೊಲೀಸ್ ಆಯುಕ್ತ ದಯಾನಂದ್ ಅವರೂ ಸೇರಿ ಐವರು ಪೊಲೀಸ್ ಅಧಿಕಾರಿಗಳನ್ನು ಅಮಾನತು ಮಾಡುವ ಮೂಲಕ ಜನತೆಗೆ ರಾಜ್ಯ ಕಾಂಗ್ರೆಸ್ ಸರ್ಕಾರ ಅತ್ಯಂತ ಕೆಟ್ಟ ಸಂದೇಶ ನೀಡಿದೆ ಎಂದು ಕುಮಾರಸ್ವಾಮಿ ಅವರು ಕಿಡಿಕಾರಿದರು.

**<><*<><>*><>**

ಭಾರತ ದೇಶದಲ್ಲಿ ಬಹಳಷ್ಟು ಸಾಧಕರಿದ್ದಾರೆ. ವಿದ್ಯಾರ್ಥಿಗಳು ಸಾಧಕರ ಮಾರ್ಗ ಅನುಸರಿಸಿ ದೇಶಕ್ಕೆ ಕೊಡುಗೆ ನೀಡಿ ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್ ಚಲುವರಾಯಸ್ವಾಮಿ ಅವರು ಹೇಳಿದ್ದಾರೆ. ಬೆಂಗಳೂರಿನ ಕಲಾಮಂದಿರದಲ್ಲಿ ಆಯೋಜಿಸಲಾಗಿದ್ದ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸರ್ಕಾರದ ವತಿಯಿಂದ ಎಲ್ಲ ಸಾಧಕರನ್ನು ಗೌರವಿಸಲು ಸಾಧ್ಯವಾಗುವುದಿಲ್ಲ. ಸಂಘ ಸಂಸ್ಥೆಗಳು ಸಾಧಕರನ್ನು ಗುರುತಿಸಿ, ಗೌರವಿಸುತ್ತಿರುವ ಕೆಲಸ ಶ್ಲಾಘನೀಯ ಎಂದರು. ಎಸ್.ಎಸ್.ಎಲ್.ಸಿ ಪರೀಕ್ಷೆಯ ಪದ್ಧತಿ ಬದಲಾವಣೆಯಿಂದ ಕಳೆದ ಬಾರಿ ಜಿಲ್ಲೆಯಲ್ಲಿ ಉತ್ತಮ ಫಲಿತಾಂಶ ಬಂದಿರಲಿಲ್ಲ. ಈ ಬಾರಿ ಜಿಲ್ಲಾಡಳಿತ ಹಾಗೂ ಶಿಕ್ಷಣ ಇಲಾಖೆ ಉತ್ತಮ ಯೋಜನೆಗಳನ್ನು ರೂಪಿಸಿ ಫಲಿತಾಂಶವನ್ನು ಉತ್ತಮಗೊಳಿಸಿದೆ ಎಂದರು. ಸರ್ಕಾರಿ ಶಾಲೆ ಎಂದರೆ ತಾತ್ಸಾರ ಬೇಡ ಇಂದು ಕಾರ್ಯಕ್ರಮದಲ್ಲಿ ಸನ್ಮಾನಿಸಿದ ಐ.ಎ.ಎಸ್. ಹಾಗೂ ಐ.ಪಿ.ಎಸ್ ಉತ್ತೀರ್ಣರಾಗಿರುವವರು ಸರ್ಕಾರಿ ಶಾಲೆಯಲ್ಲೇ ವಿದ್ಯಾಭ್ಯಾಸ ಮಾಡಿರುವವರು. ಬಹಳಷ್ಟು ಉನ್ನತ ಹುದ್ದೆಯಲ್ಲಿರುವ ಅಧಿಕಾರಿಗಳು ಹಾಗೂ ವಿಜ್ಞಾನಿಗಳಲ್ಲಿ ಶೇಕಡ ೭೦ ರಷ್ಟು ಜನ ಸರ್ಕಾರಿ ಶಾಲಾ, ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡಿರುವವರು. ಸಾಧನೆ ಮಾಡಬೇಕು ಎಂಬ ಮನೋಭಾವನೆ ಇರುವವರು ಎಷ್ಟೇ ಕಷ್ಟ ಇದ್ದರೂ ಗೆಲ್ಲುತ್ತಾರೆ ಎಂದು ಹುರಿದುಂಬಿಸಿದರು.

**<><*<><>*><>**

ಹಸಿವು ಮುಕ್ತ ಕರ್ನಾಟಕ, ಮಹಿಳೆಯರ ಸಬಲೀಕರಣ, ಸ್ವಾವಲಂಬಿ ಬದುಕಿಗೆ ಗ್ಯಾರಂಟಿ ಯೋಜನೆಗಳು ಸಹಕಾರಿಯಾಗಿವೆ. ಯಾರ ಹಸ್ತಕ್ಷೇಪ, ಮಧ್ಯವರ್ತಿಗಳ ಹಾವಳಿ ಇಲ್ಲದೆ ರಾಜ್ಯದ ಜನತೆಗೆ ಪಂಚ ಗ್ಯಾರಂಟಿಗಳು ತಲುಪುತ್ತಿದ್ದು, ರಾಜ್ಯದಲ್ಲಿ ಪಂಚ ಗ್ಯಾರಂಟಿ ಯೋಜನೆಗಳು ಅನುಷ್ಠಾನ ಗೊಳಿಸಿದನಂತರ ಆಧುನಿಕ ಅಭಿವೃದ್ಧಿಯತ್ತ ದಾಪುಗಾಲು ಇಟ್ಟಿದೆ ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಸೂರಜ್ ಹೆಗಡೆ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ನಡೆದ ಪಂಚ ಗ್ಯಾರಂಟಿ ಯೋಜನೆಗಳ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕರ್ನಾಟಕದ ಪಂಚ ಗ್ಯಾರಂಟಿಗಳು ದೇಶದಲ್ಲಿ ಹೆಚ್ಚು ಪ್ರಸಿದ್ಧಿ ಪಡೆದುಕೊಂಡು, ಇತರೆ ರಾಜ್ಯಗಳು ಕೂಡ ನಮ್ಮ ರಾಜ್ಯದ ಪಂಚ ಗ್ಯಾರಂಟಿ ಯೋಜನೆಗಳ ಮಾದರಿಯನ್ನು ಜಾರಿಗೊಳಿಸುತ್ತಿವೆ. ಪಂಚ ಗ್ಯಾರಂಟಿಗಳ ಬಗ್ಗೆ ಹೆಚ್ಚು ಪ್ರಚಾರ ಆಗಬೇಕಿದೆ ಎಂದು ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಯ ಸದಸ್ಯರುಗಳಿಗೆ ಸೂಚಿಸಿದರು.

**<><*<><>*><>**

ಅಮೆರಿಕದ ಬಾಹ್ಯಾಕಾಶ ಸಂಸ್ಥೆ ನಾಸಾ ಆಕ್ಸಿಯಾಂ ೪ ಕಾರ್ಯಕ್ರಮದ ಅನ್ವಯ ಜೂನ್ ೧೦ ರಂದು ಅಂತಾರಾಷ್ಟ್ರೀಯ ಬಾಹ್ಯಾಕಾಶ ಕೇಂದ್ರಕ್ಕೆ ಭಾರತದ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲ ತೆರಳಿದ್ದಾರೆ. ಭಾರತದ ಗಗನಯಾನ ಅಂತರಿಕ್ಷ ಪಯಣದ ಮುನ್ನ ನಮ್ಮ ಭಾರತದ ಗಗನಯಾನಿ ಬಾಹ್ಯಾಕಾಶ ಕೇಂದ್ರಕ್ಕೆ ತೆರಳುತ್ತಿರುವುದು ಮಹತ್ವಗಳಿಸಿದೆ. ಇಸ್ರೋ ನಿವೃತ್ತ ವಿಜ್ಞಾನಿ ಹಾಗೂ ಜವಹರ್‌ಲಾಲ್ ನೆಹರು ತಾರಾಲಯದ ನಿರ್ದೇಶಕರಾದ ಡಾ. ಬಿ.ಆರ್. ಗುರುಪ್ರಸಾದ್ ಆಕಾಶವಾಣಿ ಸುದ್ದಿ ವಿಭಾಗಕ್ಕೆ ಆಕ್ಸಿಯಾಂ ೪ ಬಾಹ್ಯಾಕಾಶ ಕಾರ್ಯಕ್ರಮದ ಕುರಿತು ಮಾತನಾಡಿದ್ದಾರೆ.

**ಧ್ವನಿ : ಡಾ. ಬಿ.ಆರ್. ಗುರುಪ್ರಸಾದ್**

**<><*<><>*><>**

ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಇಂದು ವಿಜಯನಗರ ಜಿಲ್ಲೆಯ ಕೊಟ್ಟೂರು ತಾಲೂಕು ಹ್ಯಾಳ್ಯ, ಬೇವೂರು ಮತ್ತು ಗೊಲ್ಲರಹಳ್ಳಿಗಳಲ್ಲಿ ಯಶಸ್ವಿಯಾಗಿ ಜರುಗಿತು. ೩೦೦ ರಿಂದ ೩೫೦ ರೈತ ಮಹಿಳೆಯರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಕೃಷಿ ತಾಂತ್ರಿಕತೆಗಳ ಬಗ್ಗೆ ಮತ್ತು ಮಣ್ಣು ಹಾಗೂ ನೀರಿನ ಪರೀಕ್ಷೆಯ ಬಗ್ಗೆ ಮಾಹಿತಿ ಪಡೆದುಕೊಂಡರು. ಗ್ರಾಮದಲ್ಲಿ ರೈತರು ಬೆಳೆಯುವ ಮೆಕ್ಕೆಜೋಳ ಮತ್ತು ಈರುಳ್ಳಿ ಬೆಳೆಗಳಿಗೆ ತಗಲುವ ಕೀಟ ಬಾಧೆಗಳ ಬಗ್ಗೆ ಮಾಹಿತಿ ಪಡೆದುಕೊಂಡ, ಹಗರಿ ವಿಜ್ಞಾನ ಕೇಂದ್ರದ ಮುಖ್ಯ ವಿಜ್ಞಾನಿಯಾದ ಡಾ. ಪಾಲಯ್ಯ ಪಿ. ಕೀಟ ನಿರ್ವಹಣೆಯ ಬಗ್ಗೆ ಸಮಗ್ರ ಮಾಹಿತಿ ನೀಡಿದರು. ಕೃಷಿ ವಿಸ್ತರಣಾ ವಿಜ್ಞಾನಿಯಾದ ಡಾಕ್ಟರ್ ನವೀನ್ ಕುಮಾರ್ ಪಿ. ಮಾತನಾಡಿ, ಬೆಳೆಗಳ ವಿವಿಧ ತಳಿಗಳ ಮತ್ತು ಬೀಜೋಪಚಾರದ ಬಗ್ಗೆ ರೈತರಿಗೆ ಮಾಹಿತಿ ತಿಳಿಸಿಕೊಟ್ಟರು.

**ಧ್ವನಿ : ಕೃಷಿ ವಿಸ್ತರಣಾ ವಿಜ್ಞಾನಿ ಡಾ. ನವೀನ್ ಕುಮಾರ್. ಪಿ**

**<><*<><>*><>**

ನೈಋತ್ಯ ರೈಲ್ವೆ ಪ್ರಧಾನ ವ್ಯವಸ್ಥಾಪಕರು ಮುಕುಲ್ ಸರನ್ ಮಾಥುರ್ ಅವರು ಇಂದು ಹುಬ್ಬಳ್ಳಿ-ತೋರಣಗಲ್ ವಿಭಾಗದಲ್ಲಿ ವಿಂಡೋ ಟ್ರೈಲಿಂಗ್ ತಪಾಸಣೆ ನಡೆಸಿ ಕಾರ್ಯಾಚರಣೆ ಮತ್ತು ಸುರಕ್ಷತಾ ಮಾನದಂಡಗಳನ್ನು ಪರಿಶೀಲನೆ ಮಾಡಿದರು. ಹುಬ್ಬಳ್ಳಿಯ ತೋರಣಗಲ್ಲಿನ ಜೆಎಸ್‌ಡಬ್ಲ್ಯೂ ಸ್ಟೀಲ್ ಘಟಕದಲ್ಲಿ, ಪ್ರಧಾನ ವ್ಯವಸ್ಥಾಪಕರು ದಕ್ಷಿಣ ಯಾರ್ಡ್‌ನಲ್ಲಿ ತಪಾಸಣೆ ನಡೆಸಿ, ಕಚ್ಚಾ ವಸ್ತುಗಳ ನಿರ್ವಹಣೆ ಪ್ರಕ್ರಿಯೆಗಳ ಕುರಿತು ಚರ್ಚೆ ನಡೆಸಿದರು. ಅವರು ಪ್ರಸ್ತುತ ಕಾರ್ಯಾಚರಣೆಯ ಅಭ್ಯಾಸಗಳನ್ನು ಶ್ಲಾಘಿಸಿದರು ಮತ್ತು ವಸ್ತು ನಿರ್ವಹಣೆಯಲ್ಲಿ ಉನ್ನತ ಮಾನದಂಡಗಳ ದಕ್ಷತೆ ಮತ್ತು ಸುರಕ್ಷತೆಯನ್ನು ಕಾಪಾಡುವ ಅಗತ್ಯತೆಯನ್ನು ಒತ್ತಿ ಹೇಳಿದರು. ಇದರ ಜೊತೆಗೆ, ಅವರು ಉತ್ತರ ಯಾರ್ಡ್‌ಗೆ ಭೇಟಿ ನೀಡಿ, ರೋಲ್ಡ್ ಸ್ಟೀಲ್ ಕಾಯಿಲ್‌ಗಳ ನಿರ್ವಹಣೆಯನ್ನು ಪರಿಶೀಲಿಸಿದರು ಮತ್ತು ಕಾರ್ಯಾಚರಣೆಗಳನ್ನು ಸುಗಮಗೊಳಿಸುವ ಕಾರ್ಯತಂತ್ರಗಳನ್ನು ಚರ್ಚಿಸಿದರು.

<><*<><>*><>

ಸರ್ಕಾರದ ಅಧೀನದಲ್ಲಿರುವ ಭದ್ರಾವತಿಯ ವಿಐಎಸ್‌ಎಲ್ ಕಾರ್ಖಾನೆಯ ಅಭಿವೃದ್ಧಿ ಸಂಬಂಧ ಕೇಂದ್ರ ಉಕ್ಕು ಸಚಿವಾಲಯದ ಕಾರ್ಯದರ್ಶಿ ಸಂದೀಪ್ ಪೌಂಡ್ರಿಕ್ ಇಂದು ಭೇಟಿ ನೀಡಿ ಪರಿಶೀಲನೆ ನಡೆಸಿದರು. ತಮಿಳುನಾಡಿನ ಸೇಲಂ ಘಟಕಕ್ಕೆ ಭೇಟಿ ನೀಡಿ ಅಲ್ಲಿನ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದ ನಂತರ ವಿಶೇಷ ವಿಮಾನದಲ್ಲಿ ಶಿವಮೊಗ್ಗ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಅವರು ಈ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದರು. ವಿಎಸ್‌ಎಲ್ ಕಾರ್ಖಾನೆಯ ವಿವಿಧ ಘಟಕಗಳು ಯಾವ ಸ್ಥಿತಿಯಲ್ಲಿದೆ ಕಾರ್ಖಾನೆಯ ಪರಿಸ್ಥಿತಿ ಹೇಗಿದೆ ಎಂಬುದನ್ನು ತಿಳಿದುಕೊಳ್ಳಲು ಭೇಟಿ ನೀಡುತ್ತಿದ್ದೇನೆ. ಕಾರ್ಖಾನೆಯ ಅಭಿವೃದ್ಧಿಗೆ ಬಂಡವಾಳ ಹೂಡುವ ಸಂಬಂಧ ಇನ್ನೂ ಯಾವುದೇ ತೀರ್ಮಾನ ಆಗಿಲ್ಲ. ಕಾರ್ಖಾನೆಯ ಭೇಟಿ ಮತ್ತು ಪರಿಶೀಲನೆ ನಂತರ ಈ ಸಂಬಂಧ ತೀರ್ಮಾನ ತೆಗೆದುಕೊಳ್ಳಲಾಗುತ್ತದೆ ಎಂದರು. ವಿಐಎಸ್‌ಎಲ್ ಕಾರ್ಖಾನೆಯಲ್ಲಿ ಉತ್ಪಾದನೆ ಆಗುವ ಉಕ್ಕನ್ನು ಬಾಹ್ಯಾಕಾಶ, ಡಿಆರ್‌ಡಿಒ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಆದ್ಯತೆ ನೀಡಲಾಗುತ್ತದೆ. ಈ ನಿಟ್ಟಿನಲ್ಲಿ ಎಲ್ಲಾ ಅವಕಾಶಗಳು ಮುಕ್ತವಾಗಿದ್ದು ಆದ್ಯತೆ ಮೇರೆಗೆ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಹೇಳಿದರು.

<><*<><>*><>

**ಹವಾಮಾನ ವರ್ತಮಾನ**

ರಾಜ್ಯದ ಮೇಲೆ ನೈರುತ್ಯ ಮಾನ್ಸೂನ್ ದುರ್ಬಲವಾಗಿತ್ತು. ಕರಾವಳಿ ಕೆಲವು ಸ್ಥಳಗಳಲ್ಲಿ ಮತ್ತು ರಾಜ್ಯದ ಒಳನಾಡಿನ ಒಂದೆರಡು ಸ್ಥಳಗಳಲ್ಲಿ ಮಳೆಯಾಗಿದ್ದು, ಉತ್ತರ ಕನ್ನಡ ಜಿಲ್ಲೆಯ ಕ್ಯಾಸಲ್ ರಾಕ್, ಕದ್ರಾ, ಬೆಳಗಾವಿಯ ಅಥ್ನಿ, ಕೊಪ್ಪಳದ ಮುನಿರಾಬಾದ್ ಮತ್ತು ಗದಗ ಜಿಲ್ಲೆಯ ಬೆಳ್ಳಟ್ಟಿ ಪ್ರದೇಶಗಳಲ್ಲಿ ಮಳೆಯಾಗಿದೆ. ಮುನ್ಸೂಚನೆಯಂತೆ ಮುಂದಿನ ೭ ದಿನದಲ್ಲಿ ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆ.  ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಭಾಗಶಃ ಮೋಡ ಕವಿದ ವಾತಾವರಣ, ಗರಿಷ್ಟ ಮತ್ತು ಕನಿಷ್ಟ ತಾಪಮಾನ ಕ್ರಮವಾಗಿ ೩೧ ಡಿಗ್ರಿ ಸೆಲ್ಸಿಯಸ್ ಮತ್ತ ೨೧ ಡಿಗ್ರಿ ಸೆಲ್ಸಿಯಸ್ ಇರು ಸಂಭವ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**